ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಏರಿಸುವ ಬಗ್ಗೆ

ಶ್ರೀ ಎಸ್. ನಾಗರಾಜು(ಸಂದೇಶ್‌ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

588 (584) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸುಪ್ರಸಿದ್ದ ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೇರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆಯೇ; ಈ ಬಗ್ಗೆ ಯೋಜನೆ ಹಾಗೂ ರೂಪುರೇಷೆಗಳನ್ನು ಸಿದ್ದಪಡಿಸಲಾಗಿದೆಯೇ;

(ಆ) ಈ ಉದ್ಯಾನವನದ ಅಭಿವೃದ್ಧಿಗೆ ಸಂಬಂಧಿಸಿದಂತೆ ಪ್ರಸ್ತುತ ಯಾವ ಯಾವ ಕಾಮಗಾರಿಗಳು ಚಾಲನೆಯಲ್ಲಿವೆ; ಬೃಂದಾವನ ಉದ್ಯಾನವನದ ವಾಹನ ನಿಲುಗಡೆ ಸ್ಥಳವನ್ನು ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಬೃಂದಾವನ ಉದ್ಯಾನವನ ವೀಕ್ಷಣೆಗೆ ಆಗಮಿಸುವ ಹಾಗೂ ಈ ರಸ್ತೆಯಲ್ಲಿ ಮುಂದೆ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿಗೆ, ಕೃಷ್ಣರಾಜಪೇಟೆ ತಾಲ್ಲೂಕಿನ ಬೂಕಿನಕೆರೆ, ವರಾಹನಾಥ ಕಲ್ಲಹಳ್ಳಿ, ಕಡೆಗೆ ಹೋಗುವ ವಾಹನಗಳು ಕೃಷ್ಣರಾಜಸಾಗರ ಜಲಾಶಯದ ಹಿಂದೆ ಇರುವ ಸೇತುವೆಯನ್ನು ಹಾದು ಹೋಗಲು ವಾಹನ ಶುಲ್ಕವನ್ನು ಕಟ್ಟಬೇಕಾಗಿದೆಯೇ; ನಿಗದಿಪಡಿಸಿರುವ ವಾಹನ ಶುಲ್ಕ ಎಷ್ಟು?